All India Radio: Bangalore
National Bulletin In Kannada
02.06.2026 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**<><><><>**

ಮುಖ್ಯಾಂಶಗಳು

1. ಮ್ಯಾನ್ಮಾರ್ ಅಧ್ಯಕ್ಷರೊಂದಿಗೆ ಪ್ರಧಾನಿ ನರೇಂದ್ರ ಮೋದಿ ದ್ವಿಪಕ್ಷೀಯ ಮಾತುಕತೆ ; ಗಡಿ ರಕ್ಷಣೆ ಮತ್ತು ಬಹುಮುಖಿ ಸಹಕಾರಕ್ಕೆ ಒತ್ತು
2. ನವದೆಹಲಿಯಲ್ಲಿ ಪಕ್ಷದ ಹಿರಿಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರೊಂದಿಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಸಭೆ
3. ಇದೇ ೪ ರಿಂದ ಎರಡು ದಿನ ಉತ್ತರ ಪ್ರದೇಶದ ವಾರಣಾಸಿಯಲ್ಲಿ ಬ್ರಿಕ್ಸ್ ಸಂಸ್ಕೃತಿ ಕಾರ್ಯಾಕಾರಿ ಗುಂಪಿನ ಸಭೆಗೆ ಭಾರತ ಆತಿಥ್ಯ
4. ಸುಪ್ರೀಂಕೋರ್ಟ್ ೫ ನೂತನ ನ್ಯಾಯಮೂರ್ತಿಗಳಿಂದ ಇಂದು ಪ್ರಮಾಣವಚನ ಸ್ವೀಕಾರ
5. ಪುರುಷರ ೧೮ ವರ್ಷದೊಳಗಿನವರ ಏಷ್ಯಾಕಪ್ ಹಾಕಿ ; ಗುಂಪು ಪಂದ್ಯದಲ್ಲಿ ಕೊರಿಯಾ ವಿರುದ್ಧ ಭಾರತಕ್ಕೆ ಜಯ

<><><><>

ಭಾರತಕ್ಕೆ ಅಧಿಕೃತ ಭೇಟಿ ನೀಡಿರುವ ಮ್ಯಾನ್ಮಾರ್ ಅಧ್ಯಕ್ಷ ಯು ಮಿನ್ ಆಂಗ್ ಲೇಂಗ್ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನಡುವೆ ನಿನ್ನೆ ನವದೆಹಲಿಯಲ್ಲಿ ಉನ್ನತ ಮಟ್ಟದ ದ್ವಿಪಕ್ಷೀಯ ಮಾತುಕತೆ ನಡೆಯಿತು. ವ್ಯಾಪಾರ, ರಕ್ಷಣೆ, ಗಡಿ ನಿರ್ವಹಣೆ ಹಾಗೂ ಸಂಸ್ಕೃತಿ ಸೇರಿದಂತೆ ಉಭಯ ದೇಶಗಳ ಪರಸ್ಪರ ಹಿತಾಸಕ್ತಿಯ ಎಲ್ಲಾ ಪ್ರಮುಖ ವಿಷಯಗಳ ಕುರಿತು ಉಭಯ ನಾಯಕರು ಸುದೀರ್ಘ ಚರ್ಚೆ ನಡೆಸಿದರು. ಸಭೆಯ ಬಳಿಕ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ, ಭಾರತ ಮತ್ತು ಮ್ಯಾನ್ಮಾರ್ ದೇಶಗಳು ವಿಶೇಷವಾಗಿ ವ್ಯಾಪಾರ, ಹೂಡಿಕೆ, ಅಭಿವೃದ್ಧಿ ಸಹಕಾರ, ಆರೋಗ್ಯ, ಶಿಕ್ಷಣ ಹಾಗೂ ಇಂಧನ ವಲಯದಲ್ಲಿ ಮತ್ತಷ್ಟು ನಿಕಟವಾಗಿ ಕಾರ್ಯನಿರ್ವಹಿಸಲು ಒಲವು ತೋರಿವೆ ಎಂದು ತಿಳಿಸಿದರು. ಇದೇ ವೇಳೆ, ಉಭಯ ದೇಶಗಳ ಭದ್ರತಾ ಹಿತಾಸಕ್ತಿಗಳಿಗೆ ಧಕ್ಕೆ ತರುವಂತಹ ಯಾವುದೇ ಚಟುವಟಿಕೆಗಳಿಗೆ ಪರಸ್ಪರ ಭೂಪ್ರದೇಶವನ್ನು ದುರುಪಯೋಗಪಡಿಸಿಕೊಳ್ಳಲು ಬಿಡುವುದಿಲ್ಲ ಎಂಬ

ಅಂಶವನ್ನು ಇಬ್ಬರೂ ನಾಯಕರು ದೃಢವಾಗಿ ಒತ್ತಿಹೇಳಿದ್ದಾರೆ ಎಂದು ವಿದೇಶಾಂಗ ಕಾರ್ಯದರ್ಶಿಗಳು ವಿವರಿಸಿದರು.

<><><><>

ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಅವರು ನವದೆಹಲಿಯಲ್ಲಿ ನಿನ್ನೆ ಪಕ್ಷದ ಹಿರಿಯ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರೊಂದಿಗೆ ಮಹತ್ವದ ಸಭೆ ನಡೆಸಿದರು. ಈ ಕುರಿತು ಮಾಧ್ಯಮಗಳೊಂದಿಗೆ ಮಾಹಿತಿ ಹಂಚಿಕೊಂಡ ಸಂಸದ ಹಾಗೂ ಪಕ್ಷದ ವಕ್ತಾರ ಡಾ. ಸಂಬಿತ್ ಪಾತ್ರಾ, ಪ್ರಧಾನಮಂತ್ರಿ ನರೇಂದ್ರ ಮೋದಿ ನೇತೃತ್ವದ ಸರ್ಕಾರದ ೧೨ ವರ್ಷಗಳ ಸೇವೆ, ಪಕ್ಷದ ಸಾಂಸ್ಥಿಕ ವಿಸ್ತರಣೆ ಮತ್ತು ಸಮಾಜದ ವಿವಿಧ ವರ್ಗಗಳಿಗೆ ಪಕ್ಷದ ವ್ಯಾಪ್ತಿಯನ್ನು ತಲುಪಿಸುವ ಭವಿಷ್ಯದ ಕಾರ್ಯಕ್ರಮಗಳ ಕುರಿತು ಸಭೆಯಲ್ಲಿ ಪ್ರಮುಖವಾಗಿ ಚರ್ಚಿಸಲಾಗಿದೆ ಎಂದು ತಿಳಿಸಿದರು. ಕೇಂದ್ರ ಸರ್ಕಾರ ಯಶಸ್ವಿಯಾಗಿ ೧೨ ವರ್ಷಗಳ ಆಡಳಿತವನ್ನು ಪೂರ್ಣಗೊಳಿಸುತ್ತಿದ್ದು, ಪ್ರಧಾನಿ ನರೇಂದ್ರ ಮೋದಿ ಅವರ ಸಮರ್ಥ ನೇತೃತ್ವದಲ್ಲಿ ಭಾರತ ಎಲ್ಲಾ ಕ್ಷೇತ್ರಗಳಲ್ಲೂ ಹೇಗೆ ಅಭಿವೃದ್ಧಿ ಹೊಂದಿ, ಪ್ರಗತಿಯ ಪಥದಲ್ಲಿ ಸಾಗುತ್ತಿದೆ ಎಂಬುದಕ್ಕೆ ದೇಶವೇ ಸಾಕ್ಷಿಯಾಗಿದೆ ಎಂದು ಅವರು ಹೇಳಿದರು. ಇದೇ ವೇಳೆ, ಪ್ರಸ್ತುತ, ಭಾರತೀಯ ಜನತಾ ಪಾರ್ಟಿ ಮತ್ತು ಎನ್‌ಡಿಎ ಮೈತ್ರಿಕೂಟ ದೇಶದ ೨೨ ರಾಜ್ಯಗಳಲ್ಲಿ ಅಧಿಕಾರದಲ್ಲಿದ್ದು, ಜನಸೇವೆ ಮಾಡುವ ಸುವರ್ಣ ಅವಕಾಶವನ್ನು ಪಡೆದುಕೊಂಡಿದೆ ಎಂದು ಅವರು ಹರ್ಷ ವ್ಯಕ್ತಪಡಿಸಿದರು.

<><><><>

ಉತ್ತರ ಪ್ರದೇಶದ ವಾರಣಾಸಿಯಲ್ಲಿ ಇದೇ ೪ ಮತ್ತು ೫ ರಂದು ಎರಡನೇ 'ಬ್ರಿಕ್ಸ್ ಸಂಸ್ಕೃತಿ ಕಾರ್ಯಕಾರಿ ಗುಂಪಿನ' ಸಭೆಗೆ ಭಾರತ ಆತಿಥ್ಯ ವಹಿಸಲಿದೆ ಎಂದು ಕೇಂದ್ರ ಸಂಸ್ಕೃತಿ ಸಚಿವಾಲಯದ ಕಾರ್ಯದರ್ಶಿ ವಿವೇಕ್ ಅಗರ್ವಾಲ್ ತಿಳಿಸಿದ್ದಾರೆ. ನವದೆಹಲಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಈ ಕುರಿತು ಮಾಹಿತಿ ನೀಡಿದ ಅವರು, ಭಾರತದ ಬ್ರಿಕ್ಸ್ ೨೦೨೬ರ ಘೋಷವಾಕ್ಯವಾದ 'ಸ್ಥಿತಿಸ್ಥಾಪಕತ್ವ, ನಾವೀನ್ಯತೆ, ಸಹಕಾರ ಮತ್ತು ಸುಸ್ಥಿರತೆಗಾಗಿ ನಿರ್ಮಾಣ' ಎಂಬ ವಿಷಯಕ್ಕೆ ಅನುಗುಣವಾಗಿ ಈ ಎರಡು ದಿನಗಳ ಸಭೆಯು ಸಾಂಸ್ಕೃತಿಕ ಸಹಕಾರದ ಕುರಿತು ಬಹುಪಕ್ಷೀಯ ಚರ್ಚೆಗಳಿಗೆ ವೇದಿಕೆ ಕಲ್ಪಿಸಲಿದೆ ಎಂದರು. ಈ ಬಾರಿಯ ಬ್ರಿಕ್ಸ್ ಸಂಸ್ಕೃತಿ ಕಾರ್ಯಕಾರಿ ಗುಂಪಿನ ಸಭೆಯು ಮುಖ್ಯವಾಗಿ ಮೂರು ಪ್ರಮುಖ ಆದ್ಯತೆಯ ವಿಷಯಗಳ ಸುತ್ತ ನಡೆಯಲಿದ್ದು, ಅದರಲ್ಲಿ ಸೃಜನಾತ್ಮಕ ಆರ್ಥಿಕತೆ ಮತ್ತು ಕೃತಕ ಬುದ್ಧಿಮತ್ತೆ, ಪರಂಪರೆಯ

ಸಂರಕ್ಷಣೆ ಹಾಗೂ ಸಂಸ್ಕೃತಿ ಮತ್ತು ಸುಸ್ಥಿರ ಅಭಿವೃದ್ಧಿ ಒಳಗೊಂಡಿವೆ ಎಂದು ಅವರು ವಿವರಿಸಿದರು. ಈ ಸಭೆಯು ಬ್ರಿಕ್ಸ್ ರಾಷ್ಟ್ರಗಳ ನಡುವಿನ ಸಾಂಸ್ಕೃತಿಕ ಸಂಬಂಧವನ್ನು ಮತ್ತಷ್ಟು ಗಟ್ಟಿಗೊಳಿಸಲಿದೆ ಎಂದು ಅವರು ಆಶಯ ವ್ಯಕ್ತಪಡಿಸಿದರು.

<><><>

ಕೇಂದ್ರ ಕೌಶಲ್ಯಾಭಿವೃದ್ಧಿ ಮತ್ತು ಉದ್ಯಮಶೀಲತೆ ಸಚಿವಾಲಯ, ವಿಶ್ವ ಆರ್ಥಿಕ ವೇದಿಕೆಯ ಸಹಯೋಗದೊಂದಿಗೆ ನವದೆಹಲಿಯಲ್ಲಿ ನಿನ್ನೆ ಇಂಡಿಯಾ ಸ್ಕಿಲ್ಸ್ ಎಕ್ಸಲರೇಟರ್ ಉನ್ನತ ಮಟ್ಟದ ದುಂಡುಮೇಜಿನ ಸಭೆಯನ್ನು ಆಯೋಜಿಸಿತ್ತು. ಒಳನೋಟದಿಂದ ಕ್ರಮದವರೆಗೆ : ಪ್ರಗತಿಗಾಗಿ ಕೌಶಲ್ಯದ ಕೊರತೆ ನೀಗಿಸುವುದು ಎಂಬ ಘೋಷವಾಕ್ಯದಡಿಯಲ್ಲಿ ಈ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು. ಸಭೆಯನ್ನು ಉದ್ದೇಶಿಸಿ ಮಾತನಾಡಿದ ಕೇಂದ್ರ ಕೌಶಲ್ಯಾಭಿವೃದ್ಧಿ ಖಾತೆ ರಾಜ್ಯ ಸಚಿವ ಜಯಂತ್ ಚೌಧರಿ, ಉದ್ಯಮದ ಇಂದಿನ ಬೇಡಿಕೆಗಳಿಗೆ ತಕ್ಕಂತೆ ಯುವಜನರ ಕೌಶಲ್ಯಗಳನ್ನು ರೂಪಿಸಿದರೆ ಭಾರತದ ಜನಸಂಖ್ಯಾಬಲ ಜಾಗತಿಕ ಪ್ರಗತಿಯ ಪ್ರೇರಕಶಕ್ತಿಯಾಗಲಿದೆ ಎಂದರು. ಭವಿಷ್ಯದ ಸವಾಲುಗಳನ್ನು ಎದುರಿಸಬಲ್ಲ ಕಾರ್ಯಪಡೆಯ ನಿರ್ಮಾಣಕ್ಕೆ ಸರ್ಕಾರ, ಉದ್ಯಮವಲಯ ಮತ್ತು ಶೈಕ್ಷಣಿಕ ವಲಯಗಳ ಜಂಟಿ ಸಹಕಾರ ಅಗತ್ಯ ಎಂದು ಅವರು ತಿಳಿಸಿದರು.

<><><>

ಹಮೀರಪುರ ಜಿಲ್ಲೆಯ ಬೆತ್ವಾ ನದಿಗೆ ಅಡ್ಡಲಾಗಿ ನಿರ್ಮಾಣ ಹಂತದಲ್ಲಿದ್ದ ಸೇತುವೆ ಕುಸಿದು ಆರು ಜನರು ಮೃತಪಟ್ಟ ದುರಂತದ ತನಿಖೆಗಾಗಿ ಉತ್ತರ ಪ್ರದೇಶ ಸರ್ಕಾರವು ಎರಡು ಪ್ರತ್ಯೇಕ ಉನ್ನತ ಮಟ್ಟದ ತನಿಖಾ ಸಮಿತಿಗಳನ್ನು ರಚಿಸಿದೆ. ಜಿಲ್ಲಾಡಳಿತ ಹಾಗೂ ಉತ್ತರ ಪ್ರದೇಶ ಸೇತುವೆ ನಿಗಮದ ಅಡಿಯಲ್ಲಿ ರಚನೆಯಾಗಿರುವ ಈ ಸಮಿತಿಗಳು ಈಗಾಗಲೇ ಘಟನೆಯ ಕುರಿತು ಸಮಗ್ರ ತನಿಖೆಯನ್ನು ಆರಂಭಿಸಿವೆ. ಈ ಕುರಿತು ಮಾಹಿತಿ ನೀಡಿರುವ ಹಮೀರಪುರ ಜಿಲ್ಲಾಧಿಕಾರಿ ಅಭಿಷೇಕ್ ಗೋಯಲ್ ಅವರು, ಜಿಲ್ಲಾಡಳಿತವು ಅಪರ ಜಿಲ್ಲಾಧಿಕಾರಿ ಅವರ ನೇತೃತ್ವದಲ್ಲಿ ಮೂರು ಸದಸ್ಯರ ತನಿಖಾ ಸಮಿತಿಯನ್ನು ರಚಿಸಿದ್ದು, ಈ ಸಮಿತಿಯು ದುರಂತಕ್ಕೆ ಸಂಬಂಧಿಸಿದ ಎಲ್ಲಾ ಆಡಳಿತಾತ್ಮಕ, ತಾಂತ್ರಿಕ ಹಾಗೂ ಕಾರ್ಯವಿಧಾನದ ಅಂಶಗಳ ಬಗ್ಗೆ ವಿವರವಾದ ಪರಿಶೀಲನೆ ನಡೆಸುತ್ತಿದೆ ಎಂದು ತಿಳಿಸಿದ್ದಾರೆ.

<><><>

ಸುಪ್ರೀಂ ಕೋರ್ಟ್‌ನ ನೂತನ ನ್ಯಾಯಮೂರ್ತಿಗಳಾಗಿ ನೇಮಕಗೊಂಡಿರುವ ಐವರು ನ್ಯಾಯಾಧೀಶರು ಇಂದು ಪ್ರಮಾಣ ವಚನ ಸ್ವೀಕರಿಸಲಿದ್ದಾರೆ. ಭಾರತದ ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ನೂತನ ನ್ಯಾಯಮೂರ್ತಿಗಳಿಗೆ ಅಧಿಕಾರದ ಪ್ರಮಾಣ ವಚನ ಬೋಧಿಸಲಿದ್ದಾರೆ. ಮುಖ್ಯ ನ್ಯಾಯಮೂರ್ತಿಗಳೊಂದಿಗೆ ಸಮಾಲೋಚನೆ ನಡೆಸಿದ ಬಳಿಕ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಈ ನೇಮಕಾತಿ ಆದೇಶ ಹೊರಡಿಸಿದ್ದಾರೆ.

ಕಾನೂನು ಸಚಿವಾಲಯದ ಅಧಿಸೂಚನೆಯ ಪ್ರಕಾರ, ಪಂಜಾಬ್ ಮತ್ತು ಹರಿಯಾಣ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಶೀಲ್ ನಾಗು, ಬಾಂಬೆ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಶ್ರೀ ಚಂದ್ರಶೇಖರ್, ಮಧ್ಯಪ್ರದೇಶ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸಂಜೀವ್ ಸಚ್‌ದೇವ ಹಾಗೂ ಜಮ್ಮು-ಕಾಶ್ಮೀರ ಮತ್ತು ಲಡಾಖ್ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಅರುಣ್ ಪಲ್ಲಿ ಅವರನ್ನು ಸುಪ್ರೀಂಕೋರ್ಟ್ ನ್ಯಾಯಮೂರ್ತಿಗಳಾಗಿ ಪದೋನ್ನತಿಗೊಳಿಸಲಾಗಿದೆ. ಇವರೊಂದಿಗೆ ಹಿರಿಯ ವಕೀಲರಾದ ವೆಂಕಿತ ಸುಬ್ರಮಣಿ ಮೋಹನಾ ಅವರನ್ನೂ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳಾಗಿ ನೇಮಕ ಮಾಡಲಾಗಿದೆ.

<><><><>

ಇಸ್ರೇಲ್ ಪ್ರಧಾನಿ ಬೆಂಜಮಿನ್ ನೇತನ್ಯಾಹು ಅವರೊಂದಿಗೆ ತಾವು ನಡೆಸಿದ ಸುದೀರ್ಘ ಮಾತುಕತೆ ಮತ್ತು ಮಧ್ಯಸ್ಥಗಾರರ ಮುಖಾಂತರ ಹೆಜ್ಬುಲ್ಲಾ ಸಂಘಟನೆಯೊಂದಿಗೆ ನಡೆಸಿದ ಸಂವಹನದ ಬಳಿಕ ಉಭಯ ಬಣಗಳು ಸಂಘರ್ಷವನ್ನು ತಗ್ಗಿಸಲು ಒಪ್ಪಿಕೊಂಡಿವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತಿಳಿಸಿದ್ದಾರೆ. ಇನ್ನು ಮುಂದೆ ಉಭಯ ಕಡೆಯಿಂದಲೂ ಯಾವುದೇ ದಾಳಿಗಳು ನಡೆಯುವುದಿಲ್ಲ ಮತ್ತು ಬೈರುತ್‌ಗೆ ಹೊರಟಿದ್ದ ಸೇನೆಯನ್ನು ವಾಪಸ್ ಕರೆಸಿಕೊಳ್ಳಲಾಗಿದೆ ಎಂದು ಅಧ್ಯಕ್ಷ ಟ್ರಂಪ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಲೆಬನಾನ್ ಗಡಿಯಲ್ಲಿ ಇಸ್ರೇಲ್‌ನ ಭೂಸೇನೆ ನುಗ್ಗಿದ ಮರುದಿನವೇ ಮತ್ತು ಇಸ್ರೇಲ್ ನಗರಗಳ ಮೇಲೆ ಹೆಜ್ಬುಲ್ಲಾ ನಡೆಸಿದ ಕ್ಷಿಪಣಿ ದಾಳಿಯ ಬೆನ್ನಲ್ಲೇ ಬೈರುತ್‌ನ ದಕ್ಷಿಣ ಉಪನಗರಗಳ ಮೇಲೆ ದಾಳಿ ನಡೆಸಲು ಇಸ್ರೇಲ್ ಸರ್ಕಾರ ಆದೇಶಿಸಿತ್ತು. ಹೆಜ್ಬುಲ್ಲಾ ಕದನ ವಿರಾಮವನ್ನು ಉಲ್ಲಂಘಿಸುತ್ತಿರುವುದೇ ಈ ದಾಳಿಗೆ ಕಾರಣ ಎಂದು ಇಸ್ರೇಲ್ ಪ್ರಧಾನಿ ನೇತನ್ಯಾಹು ಮತ್ತು ರಕ್ಷಣಾ ಸಚಿವರು ಜಂಟಿ ಹೇಳಿಕೆಯಲ್ಲಿ ತಿಳಿಸಿದ್ದರು.

<><><><>

ಬ್ಯಾಂಕ್ ವಂಚನೆ ಪ್ರಕರಣಕ್ಕೆ ಸಂಬಂಧಿಸಿಂತೆ ರಿಲಯಾನ್ಸ್ ಕಮ್ಯುನಿಕೇಷನ್ಸ್ ಗುಂಪಿನ ಉನ್ನತ ಅಧಿಕಾರಿ ಅಮಿತಾಬ್ ಜುಂಜುನ್‌ವಾಲಾ ಅವರನ್ನು ಕೇಂದ್ರೀಯ ತನಿಖಾ ದಳ-ಸಿಬಿಐ ಬಂಧಿಸಿದೆ. ಅವರು, ಆರ್‌ಕಾಮ್ ಗುಂಪಿನ ವ್ಯವಸ್ಥಾಪಕ ನಿರ್ದೇಶಕರಾಗಿ ಕಾರ್ಯ ನಿರ್ವಹಿಸುತ್ತಿದ್ದ ವೇಳೆ ಕಾರ್ಪೊರೇಟ್ ಹಣಕಾಸು, ಬ್ಯಾಂಕಿಂಗ್ ಮತ್ತು ನಿಧಿ ಬಳಕೆಯಂತಹ ಪ್ರಮುಖ ವಿಭಾಗಗಳನ್ನು ನಿಯಂತ್ರಿಸುತ್ತಿದ್ದರು ಎಂದು ಸಂಸ್ಥೆ ತಿಳಿಸಿದೆ. ಬ್ಯಾಂಕ್‌ಗಳಿಂದ ಪಡೆದ ಸಾಲದ ಹಣವನ್ನು ದುರುಪಯೋಗ ಪಡಿಸಿಕೊಂಡು ಬ್ಯಾಂಕ್‌ಗಳಿಗೆ ಭಾರೀ ಪ್ರಮಾಣದ ನಷ್ಟ ಉಂಟು ಮಾಡಿದ ಆರೋಪ ಇವರ ಮೇಲಿದೆ.

<><><><>

ಜಪಾನ್‌ನ ಕಾಕಮಿಗಹರಾದಲ್ಲಿ ನಿನ್ನೆ ನಡೆದ ಪುರುಷರ ೧೮ ವರ್ಷದೊಳಗಿನವರ ಏಷ್ಯಾಕಪ್‌ನಲ್ಲಿ ಭಾರತದ ಹಾಕಿ ತಂಡವು ಮೂರನೇ 'ಎ' ಗುಂಪಿನ ಪಂದ್ಯದಲ್ಲಿ ಕೊರಿಯಾ ವಿರುದ್ಧ ೪-೧ ಅಂತರದ ಜಯ ಸಾಧಿಸಿತು. ನಾಯಕ ಕೇತನ್ ಕುಶ್ವಾಹ ಮೂರನೇ ಮತ್ತು ೩೬ನೇ ನಿಮಿಷಗಳಲ್ಲಿ ಎರಡು ಗೋಲು ಗಳಿಸುವ ಮೂಲಕ ಮುನ್ನಡೆ ಸಾಧಿಸಿದರು. ಐದನೇ ನಿಮಿಷದಲ್ಲಿ ವರೀಂದರ್ ಸಿಂಗ್ ಮತ್ತೊಂದು ಗೋಲು ಗಳಿಸಿದರೆ, ಶಾರುಖ್ ಅಲಿ ೫೮ನೇ ನಿಮಿಷದಲ್ಲಿ ಮತ್ತೊಂದು ಗೋಲು ಗಳಿಸುವ ಮೂಲಕ ಜಯ ಸಾಧಿಸಿದರು. ಈ ಗೆಲುವಿನೊಂದಿಗೆ ಭಾರತವು 'ಎ' ಗುಂಪಿನಲ್ಲಿ ಕೊರಿಯಾ ಮತ್ತು ಜಪಾನ್ ಜೊತೆ ಆರು ಅಂಕಗಳನ್ನು ಗಳಿಸಿ ಸಮಬಲ ಸಾಧಿಸಿದೆ. ಪ್ರತಿ ಗುಂಪಿನಿಂದ ಅಗ್ರ ಎರಡು ತಂಡಗಳು ಸೆಮಿಫೈನಲ್‌ಗೆ ಮುನ್ನಡೆಯುತ್ತವೆ. ಭಾರತವು ನಾಳೆ ತನ್ನ ಕೊನೆಯ ಗುಂಪಿನ ಪಂದ್ಯದಲ್ಲಿ ಚೈನೀಸ್ ತೈಪೆಯನ್ನು ಎದುರಿಸಲಿದೆ.

<><><><>

೨೦೨೬ರ ಏಷ್ಯನ್ ಕ್ರೀಡಾಕೂಟಕ್ಕೆ ಮುಂಚಿತವಾಗಿ ಟಾರ್ಗೆಟ್ ಒಲಿಂಪಿಕ್ ಪೋಡಿಯಂ ಸ್ಕೀಮ್-ಟಿಒಪಿಎಸ್ ಅಭಿವೃದ್ಧಿ ಗುಂಪಿಗೆ ೨೨ ರೋವರ್‌ಗಳನ್ನು ಸೇರಿಸಿಕೊಳ್ಳಲಾಗಿದೆ. ಆರು ದೋಣಿಗಳಲ್ಲಿ ಒಟ್ಟು ೨೨ ರೋವರ್‌ಗಳು ಟಿಒಪಿಎಸ್ ಅಭಿವೃದ್ಧಿ ಗುಂಪಿನ ಭಾಗವಾಗಿದ್ದಾರೆ. ಈ ರೋವರ್‌ಗಳ ಸೇರ್ಪಡೆಯು ಹಲವಾರು ದೋಣಿ ವಿಭಾಗಗಳಲ್ಲಿ ಸುಸ್ಥಿರ ಸಾಮರ್ಥ್ಯ ನಿರ್ಮಿಸುವ ಮತ್ತೊಂದು ಪ್ರಯತ್ನವಾಗಿದೆ ಎಂದು ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವಾಲಯ ತಿಳಿಸಿದೆ. ಏಷ್ಯನ್ ಕ್ರೀಡಾಕೂಟ ಮತ್ತು ವಿಶ್ವಕಪ್ ಸೇರಿದಂತೆ ರೋಯಿಂಗ್ ಒಳಗೊಂಡ ಪ್ರಮುಖ ಅಂತಾರಾಷ್ಟ್ರೀಯ

ಸ್ಪರ್ಧೆಗಳಿಗೆ ಇವರು ತಯಾರಿ ನಡೆಸಲಿದ್ದಾರೆ. ಸೇರ್ಪಡೆಗೊಂಡ ಹೆಚ್ಚಿನ ಕ್ರೀಡಾಪಟುಗಳನ್ನು ಏಷ್ಯನ್ ಕ್ರೀಡಾಕೂಟ ೨೦೨೯ರ ಪಂದ್ಯಾವಳಿಯನ್ನು ದೃಷ್ಟಿಯಲ್ಲಿಟ್ಟುಕೊಂಡು ಸಿದ್ಧಪಡಿಸಲಾಗುತ್ತಿದ್ದರೂ, ಕೆಲವು ಸಿಬ್ಬಂದಿ ದೇಶದಲ್ಲಿ ಆಯೋಜಿಸಲಿರುವ ಕಾಮನ್‌ವೆಲ್ತ್ ಕ್ರೀಡಾಕೂಟ ೨೦೩೦ರ ನಂತರದ ಭವಿಷ್ಯದ ಸ್ಪರ್ಧೆಗಳನ್ನು ಗುರಿಯಾಗಿಟ್ಟುಕೊಂಡು ಭಾರತದ ವಿಶಾಲ ಅಂತಾರಾಷ್ಟ್ರೀಯ ಅಭಿವೃದ್ಧಿ ಮಾರ್ಗದ ಭಾಗವಾಗಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>